ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 19ನೇ ನವೆಂಬರ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ನಾಲ್ಕನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ನಾಲ್ಕನೇ ಪಟ್ಟಿ

2. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2015-16ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಐದನೇ ವರದಿಯನ್ನೊಪ್ಪಿಸುವುದು.

3. ಚುನಾವಣಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ, ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಉನ್ನತ ಶಿಕ್ಷಣ ಸಚಿವರು:-

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ ಅಧಿನಿಯಮ, 2009ರ ಪ್ರಕರಣ 20(ಐ)ರನ್ವಯ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ (ಪ್ರಶಾಸನ ಸಭೆ) ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ, ಗೋವಿಂದ ಎಂ. ಕಾರಜೋಳ, ಹೆಚ್.ಡಿ. ಕುಮಾರಸ್ವಾಮಿ, ವೈ.ಎಸ್.ವಿ. ದತ್ತಾ, ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲಿಕಯ್ಯ ವಿ. ಗುತ್ತೇದಾರ್ ಹಾಗೂ ಇತರರು – ರಾಜ್ಯದಲ್ಲಿನ ಬರಗಾಲ, ರೈತರ ಸಂಕಷ್ಟಗಳ ಬಗ್ಗೆ ಮುಂದುವರೆದ ಚರ್ಚೆ ನಡೆಸುವುದು.

ಮು.ತಿ.ನೋ

2. ಶ್ರೀಯುತರುಗಳಾದ ಬಿ.ಎನ್. ವಿಜಯಕುಮಾರ್, ಎಸ್. ಸುರೇಶ್‌ಕುಮಾರ್, ಎಸ್. ರಘು ಹಾಗೂ ಎಲ್.ಎ. ರವಿಸುಬ್ರಮಣ್ಯ ಅವರುಗಳು – ಬೆಂಗಳೂರು ನಗರದಲ್ಲಿ ಕಸದ ಸಮಸ್ಯೆ ಹೆಚ್ಚಾಗಿದ್ದು, ಕಸ ವಿಲೇವಾರಿಯಾಗದೆ ರಸ್ತೆ, ಪಾರ್ಕ್ ಮತ್ತು ಖಾಲಿ ನಿವೇಶನಗಳಲ್ಲಿ ಕಸವನ್ನು ಅವೈಜ್ಞಾನಿಕವಾಗಿ ವಿಂಗಡಣೆ ಮಾಡಲಾಗುತ್ತಿರುವುದರಿಂದ ಸಾರ್ವಜನಿಕರಿಗೆ ಅನಗತ್ಯ ಕಿರಿಕಿರಿ ಉಂಟಾಗಿ ಆರೋಗ್ಯಕ್ಕೆ ಹಾನಿಯುಂಟಾಗುತ್ತಿದ್ದು, ಕಸದ ಸಮಸ್ಯೆಯನ್ನು ವೈಜ್ಞಾನಿಕವಾಗಿ ನಿಭಾಯಿಸುವ ಬಗ್ಗೆ ಚರ್ಚಿಸುವುದು.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್. ಎನ್. ಸುಬ್ಬಾರೆಡ್ಡಿ ಅವರು – ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರವು ಹಿಂದುಳಿದ ಕ್ಷೇತ್ರವಾಗಿದ್ದು, ಸಿ.ಎಂ.ಜಿ.ಎಸ್.ವೈ. ಮತ್ತು ನಬಾರ್ಡ್ ಆರ್.ಐ.ಡಿ.ಎಫ್-20 ಯೋಜನೆಗಳಡಿಯಲ್ಲಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡದೆ ಇರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ. ಬೋಪಯ್ಯ ಅವರು – ಕೊಡಗು ಜಿಲ್ಲೆಯ ಜಮ್ಮಾ ಬಾಣೆಗೆ ಸಂಬಂಧಿಸಿದಂತೆ ಕಂದಾಯ ವಿಧಿಸಲು 2013ರಲ್ಲಿ ಕಾಯ್ದೆಯಾಗಿದ್ದರೂ, ಕಂದಾಯ ವಿಧಿಸದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಮಾನಪ್ಪ ಡಿ. ವಜ್ಜಲ್ ಅವರು – ರಾಯಚೂರು ಜಿಲ್ಲೆ ಲಿಂಗಸುಗೂರು ತಾಲ್ಲೂಕಿನಲ್ಲಿ ಮಟ್ಕಾ ಹಾವಳಿಯಿಂದ ಆರ್ಥಿಕ ಸಂಕಷ್ಟಕ್ಕೀಡಾಗುತ್ತಿರುವ ಕುಟುಂಬದ ಸದಸ್ಯರು ನೇಣಿಗೆ ಶರಣಾಗುತ್ತಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು – ರಾಜ್ಯದಲ್ಲಿರುವ ಎನ್.ಬಿ.ಎ. ಯೋಜನೆಯನ್ನು ರದ್ದುಗೊಳಿಸಿ ಸ್ವಚ್ಛ ಭಾರತ್ ಮಿಷನ್ ಅನುಷ್ಠಾನಗೊಳಿಸಿದಾಗ, ಶೌಚಾಲಯಗಳ ಅಗತ್ಯತೆ ಅರಿಯಲು ನಡೆಸಿದ ಸಮೀಕ್ಷೆ ದೋಷಯುಕ್ತವಾಗಿ ಸಾರ್ವಜನಿಕರಿಗೆ ಅನಾನುಕೂಲ ಉಂಟಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

5. ಶ್ರೀ ಕೆ. ಗೋಪಾಲಪೂಜಾರಿ ಅವರು – ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಉಪ್ಪುಂದ ಮಡಿಕಲ್ ಹೌಟರ್ ಹಾರ್ಬರ್ ಯೋಜನೆ ಕಾಮಗಾರಿ ಪ್ರಾರಂಭವಾಗದೆ ಇರುವ ಬಗ್ಗೆ ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರ ಗಮನ ಸೆಳೆಯುವುದು.

6. ಶ್ರೀ ಎಂ. ಕೃಷ್ಣಾರೆಡ್ಡಿ ಅವರು – ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಮರಳು ಸಾಗಾಣಿಕೆ ಮಾಡಲು ವಾಹನಗಳಿಗೆ ಕಾರ್ಯಾದೇಶ ನೀಡಿರುವ ತಹಶೀಲ್ದಾರ್ ವಿರುದ್ಧ ಕಾನೂನು ಕ್ರಮದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯವುದು.

7. ಶ್ರೀ ಹೆಚ್.ಡಿ. ರೇವಣ್ಣ ಅವರು – ಹಾಸನ ಜಿಲ್ಲೆಯ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಯು ಅಕ್ರಮ ಮರಳು ದಂಧೆಕೋರರಿಂದ ಮಾಮೂಲಿ ಪಡೆದು ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡುತ್ತಿದ್ದು, ಕಾನೂನು ಬಾಹಿರ ಚಟುವಟಿಕೆಗೆ ಸಹಕಾರ ನೀಡುತ್ತಿರುವ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರ ಗಮನ ಸೆಳೆಯುವುದು.

6. ಖಾಸಗಿ ಸದಸ್ಯರ ಕಾರ್ಯಕಲಾಪಗಳು

ಖಾಸಗಿ ಸದಸ್ಯರ ವಿಧೇಯಕಗಳನ್ನು ಮಂಡಿಸುವುದು

(i) ಕರ್ನಾಟಕ ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ, 2015 (2015ರ ಖಾಸಗಿ ಸದಸ್ಯರ ವಿಧೇಯಕ-01)

ಶ್ರೀ ಕೆ.ಆರ್. ರಮೇಶ್ ಕುಮಾರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ (2015ರ ಖಾಸಗಿ ಸದಸ್ಯರ ವಿಧೇಯಕ-01)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು:

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕ, 2015 (2015ರ ಖಾಸಗಿ ಸದಸ್ಯರ ವಿಧೇಯಕ-02)

ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ಭೂ ಕಂದಾಯ (2015ರ ಖಾಸಗಿ ಸದಸ್ಯರ ವಿಧೇಯಕ-02)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು:

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR.